ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಸ್ವಾತಂತ್ರ್ಯದ ಅಮೃತ ಮಹೋತ್ಸವ

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಕವಿಪ್ರನಿನಿ/ಬಿ9/21481/2021-22

ದಿನಾಂಕ : 18 JUL 2022

## ಸುತ್ತೋಲೆ

**ವಿಷಯ:-** **ಸ್ವಾತಂತ್ರ್ಯದ ಅಮೃತ ಮಹೋತ್ಸವದ ಹಿನ್ನಲೆಯಲ್ಲಿ "ಹರ್ ಘರ್ ತಿರಂಗಾ" ಅಭಿಯಾನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಕುರಿತು.**

ಉಲ್ಲೇಖ:- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆಯ ರವರ ಪತ್ರ ದಿನಾಂಕ 12/06/2022 ಮತ್ತು 08/07/2022.

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75 ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಈ ಸಂಭ್ರಮದ ಒಂದು ಭಾಗವಾಗಿ ಕೇಂದ್ರ ಸರ್ಕಾರವು **"ಹರ್ ಘರ್ ತಿರಂಗಾ"** ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 13 ರಿಂದ 15 ರವರೆಗೆ ದೇಶದ ಪ್ರತಿ ಮನೆ-ಮನೆಯಲ್ಲೂ ರಾಷ್ಟ್ರ ಧ್ವಜವನ್ನು ಹಾರಿಸಿ ದೇಶ ಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಗೊಳಿಸಿ ದಾಖಲಿಸುವಂತೆ ಕರೆ ನೀಡಿ ಅಭಿಯಾನ ಹಮ್ಮಿಕೊಂಡಿದೆ. ಈ ಸಂಬಂಧ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ರವರು ಉಲ್ಲೇಖದ ಪತ್ರಗಳಲ್ಲಿ ಸ್ವಾತಂತ್ರ್ಯದ ಅಮೃತ ಮಹೋತ್ಸವ ಅಂಗವಾಗಿ ಮನೆ-ಮನೆಯಲ್ಲೂ ರಾಷ್ಟ್ರಧ್ವಜ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಕವಿಪ್ರನಿನಿಯ ಎಲ್ಲಾ ಕಚೇರಿಗಳು, ಉಪಕೇಂದ್ರಗಳು ಹಾಗೂ ಕವಿಪ್ರನಿನಿಯ ಎಲ್ಲಾ ಅಧಿಕಾರಿಗಳು/ನೌಕರರು ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ **"ಹರ್ ಘರ್ ತಿರಂಗಾ"** ಅಭಿಯಾನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

1. ರಾಜ್ಯಾದ್ಯಂತ ಇರುವ ಕವಿಪ್ರನಿನಿಯ ಎಲ್ಲಾ ಕಚೇರಿಗಳು, ಉಪಕೇಂದ್ರಗಳ ನಿಯಂತ್ರಣ ಕಟ್ಟಡಗಳು, ಅತಿಥಿ ಗೃಹಗಳು ಹಾಗೂ ಇತರೆ ಕಟ್ಟಡಗಳ ಮೇಲೆ ದಿನಾಂಕ 13/08/2022 ರಿಂದ 15/08/2022 ರಾಷ್ಟ್ರ ಧ್ವಜವನ್ನು ಹಾರಿಸಲು ಸೂಚಿಸಿದೆ.
2. ನಿಗಮದ ಎಲ್ಲಾ ಕಚೇರಿ/ಉಪಕೇಂದ್ರಗಳ ನಿಯಂತ್ರಣ ಕಟ್ಟಡಗಳು/ಅತಿಥಿ ಗೃಹಗಳು/ಇತರೆ ಕಟ್ಟಡಗಳ ಮೇಲೆ/ಮುಂದೆ ಧ್ವಜ ಸ್ಥಂಭವನ್ನು ಅಳವಡಿಸದಿದ್ದಲ್ಲಿ ಸೂಕ್ತ ಧ್ವಜ ಸ್ಥಂಭವನ್ನು ಅಳವಡಿಸಿ The flag code of India 2002 (as amended in 2021) ರಲ್ಲಿ ನಿಗಧಿಪಡಿಸಿರುವ 5 ಅಥವಾ 6 ನೇ ಧ್ವಜ ಸಂಖ್ಯೆಯ ಅಳತೆಯ ರಾಷ್ಟ್ರ ಧ್ವಜವನ್ನು ಕಡ್ಡಾಯವಾಗಿ ಹಾರಿಸಲು ಕ್ರಮಕೈಗೊಳ್ಳುವುದು. The flag code of India 2002 (as amended in 2021) ದಲ್ಲಿ ನೀಡಿರುವ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಈ ಸಂಬಂಧ, The flag code of India 2002 (as amended in 2021) ರ ಪ್ರತಿಯನ್ನು ನಿಗಮದ ಅಂತರ್ಜಾಲದಲ್ಲಿ ಮಾಹಿತಿಗಾಗಿ ಪ್ರಕಟಿಸಲಾಗಿದೆ.

3. ರಾಜ್ಯಾದ್ಯಂತ ಇರುವ ಕವಿಪ್ರನಿನಿಯ ವಸತಿ ಗೃಹಗಳಲ್ಲಿ ವಾಸಿಸುತ್ತಿರುವ ಎಲ್ಲಾ ಕವಿಪ್ರನಿನಿ/ಎಸ್ಕಾಂ ಗಳ ಅಧಿಕಾರಿಗಳು/ನೌಕರರುಗಳಿಗೆ ತಮ್ಮ ಕುಟುಂಬ ವರ್ಗದವರೊಂದಿಗೆ **"ಹರ್ ಘರ್ ತಿರಂಗಾ"** ಅಭಿಯಾನದಂತೆ ವಸತಿ ಗೃಹದ ಮೇಲೆ/ಅಂಗಳದಲ್ಲಿ ರಾಷ್ಟ್ರ ಧ್ವಜವನ್ನು ಕಡ್ಡಾಯವಾಗಿ ಹಾರಿಸಿ, ದೇಶಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಗೊಳಿಸಲು ಸೂಚಿಸಿದೆ.

4. ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಹಾಗೂ ವಸತಿ ಗೃಹಗಳಲ್ಲಿ ವಾಸಿಸದಿರುವ ಎಲ್ಲಾ ಕವಿಪ್ರನಿನಿ ಅಧಿಕಾರಿಗಳು/ ನೌಕರರುಗಳಿಗೆ ತಮ್ಮ ತಮ್ಮ ಮನೆಯ ಮೇಲೆ/ಮನೆಯ ಅಂಗಳದಲ್ಲಿ ಕುಟುಂಬ ವರ್ಗ ಮತ್ತು ನೆರೆಹೊರೆಯವರನ್ನು ಸೇರಿಸಿ ಸ್ವತಃ ತಾವೆ ಮುಂದಾಳತ್ವ ವಹಿಸಿ **"ಹರ್ ಘರ್ ತಿರಂಗಾ"** ಅಭಿಯಾನ ಅನುಷ್ಠಾನಗೊಳಿಸುವಂತೆ ಸೂಚಿಸುವುದು.

5. ಭಾರತ ಸರ್ಕಾರದ ಗೃಹ ವ್ಯವಹಾರಗಳ ಮಂತ್ರಾಲಯವು The flag code of India 2002 (as amended in 2021) ಗೆ ತಿದ್ದುಪಡಿಯನ್ನು ತರಲಾಗಿದ್ದು, ಕೈಯಲ್ಲಿ ತಯಾರಿಸಿದ ರಾಷ್ಟ್ರೀಯ ಧ್ವಜ ಅಥವಾ ಯಂತ್ರದಿಂದ ತಯಾರಿಸಿದ ಪಾಲಿಸ್ಟರ್, ಹತ್ತಿ, ಉಣ್ಣೆ, ರೇಷ್ಮೆ, ಖಾದಿ ಬಟ್ಟೆಯಿಂದ ತಯಾರಿಸುವ ರಾಷ್ಟ್ರ ಧ್ವಜವನ್ನು ಹಾರಿಸಬಹುದಾಗಿದೆ.

6. Government e market place (GeM) ಜಾಲತಾಣದಲ್ಲಿ/ಕರ್ನಾಟಕ ಸರ್ಕಾರದ ಅಧಿಕೃತ ಮಾರಾಟ ಕೇಂದ್ರಗಳಲ್ಲಿ ರಾಷ್ಟ್ರಧ್ವಜ ಲಭ್ಯವಿದ್ದು, ಎಲ್ಲಾ ಅಧಿಕಾರಿಗಳು/ ನೌಕರರುಗಳಿಗೆ ರಾಷ್ಟ್ರಧ್ವಜವನ್ನು ಖರೀದಿಸಿ ದಿನಾಂಕ 13/08/2022 ರಿಂದ 15/08/2022 ರವರೆಗೆ **"ಹರ್ ಘರ್ ತಿರಂಗಾ"** ಅಭಿಯಾನದಲ್ಲಿ ಪಾಲ್ಗೊಂಡು ರಾಷ್ಟ್ರಪ್ರೇಮವನ್ನು ಅಭಿವ್ಯಕ್ತಗೊಳಿಸುವಂತೆ ಪ್ರೇರೆಪಿಸಲು ಸೂಚಿಸಿದೆ.

7. ನಿಗಮದ ಎಲ್ಲಾ ಕಚೇರಿಗಳ ಮುಖ್ಯಸ್ಥರು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ನಿಗಮದ ಕಟ್ಟಡಗಳಲ್ಲಿ ದಿನಾಂಕ 13/08/2022 ರಿಂದ 15/08/2022 ರವರೆಗೆ **"ಹರ್ ಘರ್ ತಿರಂಗಾ"** ಅಭಿಯಾನ ಕುರಿತು ಕೈಗೊಂಡ ಕ್ರಮದ ಬಗ್ಗೆ ಉತ್ತಮ ಗುಣಮಟ್ಟದ ಛಾಯಾಚಿತ್ರ/ವಿಡಿಯೋ ಗಳೊಂದಿಗೆ ಅನುಪಾಲನಾ ವರದಿಯನ್ನು ತಮ್ಮ ಕಚೇರಿಯಲ್ಲಿ ದಾಖಲಿಸಿಕೊಳ್ಳುವಂತೆ ಸೂಚಿಸಿದೆ.

**ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)**
**ಕವಿಪ್ರನಿನಿ, ಬೆಂಗಳೂರು.**

**ಪ್ರತಿಗಳು:-**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಜೆಸ್ಕಾಂ/ಹೆಸ್ಕಾಂ.
2. ಎಲ್ಲಾ ಮುಖ್ಯ ಇಂಜಿನಿಯರುಗಳು (ವಿ), ಕವಿಪ್ರನಿನಿ.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ (ಸಿವಿಲ್), ಕವಿಪ್ರನಿನಿ.
6. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
7. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು – ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರುಗಳು (ವಿ)/ (ಸಿವಿಲ್), ಕವಿಪ್ರನಿನಿ.
9. ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
10. ಲೆಕ್ಕಾಧಿಕಾರಿ (ಕೋಡೀಫಿಕೇಷನ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಪ್ರಸರಣ)/ ನಿರ್ದೇಶಕರು (ಆ ಮತ್ತು ಮಾ. ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.